ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ
ದಿನಾಂಕ : DATE : 22/3/21

### ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅಭಿಪ್ರಾಯ

# ಜಾತಿ ವ್ಯವಸ್ಥೆಯೇ ಭ್ರಷ್ಟಾಚಾರಕ್ಕೆ ಬುನಾದಿ

ಪ್ರಜಾವಾಣಿ ವಾರ್ತೆ 22-3-21

ಬೆಂಗಳೂರು: 'ಜಾತಿ ವ್ಯವಸ್ಥೆಯು ಸಮಾಜದ ಬಹುದೊಡ್ಡ ಪಿಡುಗು. ಭ್ರಷ್ಟಾಚಾರಕ್ಕೆ ಇದೇ ಬುನಾದಿ. ಸಂತರು, ಸೂಫಿಗಳು, ದಾರ್ಶನಿಕರು, ಸಮಾಜ ಸುಧಾರಕರು ಎಷ್ಟೆಲ್ಲಾ ಪ್ರಯತ್ನಪಟ್ಟರೂ ಈ ಪಿಡುಗನ್ನು ಬೇರು ಸಹಿತ ಕಿತ್ತೊಗೆಯಲು ಆಗಿಲ್ಲ. ಈ ವ್ಯವಸ್ಥೆ ಜೀವಂತವಾಗಿರುವವರೆಗೂ ಸಮಾಜದಲ್ಲಿ ಬದಲಾವಣೆ ಸಾಧ್ಯವಿಲ್ಲ' ಎಂದು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಎಚ್.ಎಂ.ರೇವಣ್ಣ ಸಾಂಸ್ಕೃತಿಕ ಪ್ರತಿಷ್ಠಾನವು ನಗರದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 'ಎಚ್.ಎಂ.ರೇವಣ್ಣ-ಅಭಿನಂದನೆಮತ್ತುಗ್ರಂಥಗಳಬಿಡುಗಡೆ'ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

'ಬಡವರು ಹಾಗೂ ಶೋಷಿತ ವರ್ಗಕ್ಕೆ ಅವಕಾಶಗಳನ್ನು ಕಲ್ಪಿಸಿಕೊಡುವುದು ನಿಜವಾದ ರಾಜಕಾರಣ. ಬಡವರು ಮುಖ್ಯವಾಹಿನಿಗೆ ಬರದೇ ಹೋದರೆ ಸಮ ಸಮಾಜದ ಆಶಯ ಈಡೇರುವುದಿಲ್ಲ. ರಾಜಕೀಯ ಸ್ವಾತಂತ್ರ್ಯದಲ್ಲಿ ಆರ್ಥಿಕ ಮತ್ತು ಸಾಮಾಜಿಕ ಸ್ವಾತಂತ್ರ್ಯ ಸೇರಿದಾಗ ಮಾತ್ರ ಬದಲಾವಣೆ ಸಾಧ್ಯ ಎಂದು ಬಿ.ಆರ್. ಅಂಬೇಡ್ಕರ್ ಅವರೇ ಹೇಳಿದ್ದಾರೆ. ತಮ್ಮ ಜಾತಿಯವರು ಎಂಬ ಕಾರಣಕ್ಕೆ ಭ್ರಷ್ಟ ರಾಜಕಾರಣಿ ಹಾಗೂ ಅಧಿಕಾರಿಗಳನ್ನು ಜನರೇ ಸಮರ್ಥಿಸಿಕೊಳ್ಳುತ್ತಾರೆ. ಈ ಧೋರಣೆ ಬದಲಾಗಬೇಕು' ಎಂದರು.

ಕಾಂಗ್ರೆಸ್ ಮುಖಂಡ ಎಂ.ವೀರಪ್ಪ ಮೊಯಿಲಿ, 'ರೇವಣ್ಣ ನಾನು ಗುರುತಿಸಿದ ಶಾಸಕ. ಅವರು ಜನಪರ ಕೆಲಸಗಳನ್ನುಮಾಡುತ್ತಾ ಇಷ್ಟು ಎತ್ತರಕ್ಕೆ ಬೆಳೆದಿರುವುದು ಹೆಮ್ಮೆಯ ವಿಷಯ' ಎಂದರು.



ಎಚ್.ಎಂ.ರೇವಣ್ಣ ಮತ್ತು ವತ್ಸಲಾ ರೇವಣ್ಣ ಅವರನ್ನು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅಭಿನಂದಿಸಿದರು. ಕವಿ ಡಾ.ಸಿದ್ದಲಿಂಗಯ್ಯ, ಲೇಖಕಿ ಬಿ.ಟಿ.ಲಲಿತಾ ನಾಯ್ಕ್, ಎಂ.ವೀರಪ್ಪ ಮೊಯಿಲಿ, ಕೆಪಿಸಿಸಿ ಕಾರ್ಯಾಧ್ಯಕ್ಷ ರಾಮಲಿಂಗಾರೆಡ್ಡಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಬಿ.ಕೆ.ರವಿ ಮತ್ತು ಮಾಜಿ ಶಾಸಕ ಚಂದ್ರಶೇಖರ್ ಇದ್ದಾರೆ ಪ್ರಜಾವಾಣಿ ಚಿತ್ರ

## ಗಣ್ಯರಿಗೆ ಕೊಲೆ ಬೆದರಿಕೆ: ಲಲಿತಾ ನಾಯ್ಕ್

'ಹಂತಕರು ಮೇ 1ಕ್ಕೆ ನನಗೆ ಮುಹೂರ್ತ ಇಟ್ಟಿದ್ದಾರಂತೆ. ಅದೇ ದಿನ ನಟ ಶಿವರಾಜ್‌ಕುಮಾರ್, ಪಬ್ಲಿಕ್ ಟಿವಿ ಸಂಪಾದಕ ಎಚ್.ಆರ್.ರಂಗನಾಥ್ ಹಾಗೂ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಅವರ ಹತ್ಯೆ ಮಾಡುತ್ತಾರಂತೆ. ಈ ಬಗ್ಗೆ ಕರೀಂ ಚಳ್ಳಕೆರೆ ಎಂಬ ವ್ಯಕ್ತಿ ನನಗೆ ಪತ್ರ ಬರೆದಿದ್ದಾರೆ. ಈ ವಿಷಯವನ್ನು ಪೊಲೀಸರ ಗಮನಕ್ಕೆ ತಂದಿದ್ದೇನೆ. ಅವರು ಭದ್ರತೆ ಒದಗಿಸಿದ್ದಾರೆ' ಎಂದು ಲೇಖಕಿ ಬಿ.ಟಿ.ಲಲಿತಾ ನಾಯ್ಕ್ ಹೇಳಿದರು.

'ಸಿ.ಟಿ.ರವಿ ಇಲ್ಲವೇ ನನ್ನನ್ನು ಕೊಲ್ಲಬೇಕು. ಇಬ್ಬರನ್ನೂ ಒಟ್ಟಿಗೆ ಕೊಲ್ಲುತ್ತೇವೆ ಅಂತ ಬರೆದಿದ್ದಾರೆ. ಇದನ್ನು ನೋಡಿದಾಗ ಯಾರೋ ಹುಡುಗಾಟಿಕೆಗೆ ಇದನ್ನು ಬರೆದಿರಬಹುದು ಅಂತ ಅನಿಸುತ್ತಿದೆ' ಎಂದು ಅವರು ಹೇಳಿದರು.

'ಗೌರಿ ಲಂಕೇಶ್ ಹಾಗೂ ಎಂ.ಎಂ.ಕಲಬುರ್ಗಿ ಅವರನ್ನು ಹತ್ಯೆಗೈದ ವ್ಯಕ್ತಿಗಳಿಗೇ ಸುಪಾರಿ ಕೊಡಲಾಗಿದೆ. ಹಂತಕರು ಕೇರಳದ ಮಹಮ್ಮದ್ ರಸೂಲ್ ಹಾಗೂ ಹಾಸನದ ಮುಸ್ತಾಫ ಅಲಿಖಾನ್‌ರಿಂದ ಸುಪಾರಿ ಪಡೆದಿದ್ದಾರೆ. ಹೀಗಾಗಿ ನಾಲ್ಕು ಜನಕ್ಕೆ ಪೊಲೀಸರು ರಕ್ಷಣೆ ನೀಡಬೇಕು ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ' ಎಂದರು.

### 'ಕ್ರಮ ಕೈಗೊಳ್ಳುವೆವು'

'ಲೇಖಕಿ ಬಿ.ಟಿ.ಲಲಿತಾ ನಾಯ್ಕ್ ಹಾಗೂ ಇತರ ಪ್ರಮುಖರಿಗೆ ಕೊಲೆ ಬೆದರಿಕೆ ಹಾಕಲಾಗಿದೆ ಎಂಬುದು ನಮ್ಮ ಗಮನಕ್ಕೆ ಬಂದಿದೆ. ಇದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ' ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.

'ಈ ಸಂಬಂಧ ದೂರು ದಾಖಲಾಗಿದೆ. ಇದರ ಬಗ್ಗೆ ಸಮಗ್ರ ತನಿಖೆ ನಡೆಸುತ್ತೇವೆ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ' ಎಂದು ಸುದ್ದಿಗಾರರಿಗೆ ತಿಳಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, 'ನಮ್ಮದು 35 ವರ್ಷಗಳ ಗೆಳೆತನ. ರಾಜಕಾರಣದಲ್ಲಿ ದ್ವೇಷ, ಅಸೂಯೆ ಹೆಚ್ಚು. ಹೀಗಿದ್ದರೂ ನಾನು, ರೇವಣ್ಣ ಮತ್ತು ಸಿದ್ದರಾಮಯ್ಯ ಕುಟುಂಬದ ಸದಸ್ಯರಂತಿದ್ದೇವೆ' ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ರಾಮಲಿಂಗಾರೆಡ್ಡಿ 'ನಾನು ಮತ್ತು ರೇವಣ್ಣ ಜೊತೆ ಜೊತೆಯಾಗಿಯೇ ಬೆಳೆದವರು. ಅವರು ಉತ್ತಮ ಕಬಡ್ಡಿ ಆಟಗಾರ. ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವಂತೆ ಎಲ್ಲರನ್ನೂ ಪ್ರೇರೇಪಿಸುತ್ತಿದ್ದರು' ಎಂದರು.

ಎಚ್.ಎಂ.ರೇವಣ್ಣ, 'ಇವತ್ತಿನ ರಾಜಕಾರಣ ಹಣ ಬಲ ಮತ್ತು ತೋಳ್ಬಲದ ಮೇಲೆ ನಡೆಯುತ್ತಿದೆ. ಇಂತಹ ವ್ಯವಸ್ಥೆಯಲ್ಲಿ ನಾವು ಸ್ವಂತ ಬಲದಿಂದ ಮೇಲಕ್ಕೇರಿದ್ದೇವೆ' ಎಂದರು.

ಕವಿ ಸಿದ್ದಲಿಂಗಯ್ಯ 'ಬೂಸಾ ಚಳವಳಿ ವೇಳೆ ನನ್ನ ಮೇಲೆ ಹಲ್ಲೆ ನಡೆದಿತ್ತು. ಆಗ ರೇವಣ್ಣ ನನ್ನ ಜೀವ ಉಳಿಸಿದ್ದರು. ಈ ವೇದಿಕೆಯಲ್ಲಿ ಕುಳಿತು ಮಾತನಾಡುತ್ತಿರುವುದಕ್ಕೆ ಅವರೇ ಕಾರಣ' ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್, 'ಸಂಗತ' ಕೃತಿಯ ಸಂಪಾದಕರಾದ ಲಕ್ಷ್ಮಣ ಕೊಡಸೆ, ಕಾ.ತ.ಚಿಕ್ಕಣ್ಣ, ಕಿರುಚಿತ್ರ ನಿರ್ದೇಶಕ ಹಲಿ ಚಂದ್ರಶೇಖರ ಇದ್ದರು.